## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗವು ವ್ಯಾಪಕವಾಗಿ ಹರಡುತ್ತಿರುವುದರಿಂದ ಸಹಕಾರ ಸಂಘಗಳ /ಸೌಹಾರ್ದ ಸಹಕಾರಿಗಳ ವಾರ್ಷಿಕ ಸಾಮಾನ್ಯ ಸಭೆಯನ್ನು video conference / virtual meeting ಮೂಲಕ ನಡೆಸುವ ಕುರಿತು.

**ಓದಲಾಗಿದೆ:-1** ಸರ್ಕಾರದ ಆದೇಶ ಸಂಖ್ಯೆ:ಸಇ 43 ಸಿಎಲ್ಎಮ್ 2020 (ಇ), ದಿನಾಂಕ:24.06.2020

**2** ಸರ್ಕಾರದ ಆದೇಶ ಸಂಖ್ಯೆ:ಸಇ 44 ಸಿಎಲ್ಎಮ್ 2020 (ಇ), ದಿನಾಂಕ:08.07.2020

**3** ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ ಬೆಂಗಳೂರು ಇವರ ಪತ್ರ ಸಂಖ್ಯೆ:ಸಸಂನಿ/ಆರ್ಎಸ್ಆರ್/ಎಕ್ಸ್ಎಮ್ಸಿ/11/2020-21, ದಿನಾಂಕ:14.10.2020

*****

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ರಾಜ್ಯದಲ್ಲಿ ಕೋವಿಡ್-19 ರೋಗವು ವ್ಯಾಪಕವಾಗಿ ಹರಡುತ್ತಿರುವುದರಿಂದ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959ರ ಕಲಂ 121ರಡಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 1959 ರ ಕಲಂ 27(1) ರಲ್ಲಿ ಸಹಕಾರ ಸಂಘಗಳ ವಾರ್ಷಿಕ ಸಾಮಾನ್ಯ ಸಭೆಯನ್ನು **ಸೆಪ್ಟೆಂಬರ್ ಇಪ್ಪತ್ತೈದರೊಳಗಾಗಿ** ನಡೆಸತಕ್ಕದ್ದು ಎಂಬುದನ್ನು ಸಡಿಲಿಸಿ, 25ನೇ **ಡಿಸೆಂಬರ್ 2020 ರೊಳಗಾಗಿ** ನಡೆಸಲು ಹಾಗೂ ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 70 ರಡಿ ಸರ್ಕಾರಕ್ಕೆ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997 ರ ಪ್ರಕರಣ 27(ಹೆಚ್-3), 30(1) ಹಾಗೂ 60(1) ರಡಿ ಸೌಹಾರ್ದ ಸಹಕಾರಿಗಳ ವಾರ್ಷಿಕ ಸಾಮಾನ್ಯ ಸಭೆಯನ್ನು **ಸೆಪ್ಟೆಂಬರ್ ಇಪ್ಪತ್ತೈದರೊಳಗಾಗಿ** ನಡೆಸತಕ್ಕದ್ದು ಎಂಬುದನ್ನು ಸಡಿಲಿಸಿ, **25ನೇ ಡಿಸೆಂಬರ್ 2020 ರೊಳಗಾಗಿ** ನಡೆಸಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (3) ರಲ್ಲಿ ಸಹಕಾರಿ ಸಂಘಗಳ /ಸೌಹಾರ್ದ ಸಹಕಾರಿಗಳ ವಾರ್ಷಿಕ ಸಾಮಾನ್ಯ ಸಭೆಯನ್ನು video conference / virtual meeting ಮೂಲಕ ನಡೆಸಲು ಈ ಕೆಳಕಂಡ ನಿಬಂಧನೆಗೊಳಪಟ್ಟು ಸರ್ಕಾರದ ನಿರ್ದೇಶನ ನೀಡುವಂತೆ ಸಹಕಾರ ಸಂಘಗಳ ನಿಬಂಧಕರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಲಾಗಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಸಇ 43 ಸಿಎಲ್ಎಮ್ 2020 (ಇ) ಬೆಂಗಳೂರು, ದಿನಾಂಕ: 21.10.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಕಲಂ 121ರಡಿ ಹಾಗೂ ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ,1997ರ ಕಲಂ 70ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಹಾಗೂ ವಿಪತ್ತು ನಿರ್ವಹಣೆ ಅಧಿನಿಯಮ 2005 ರಡಿಯಲ್ಲಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 158 ಟಿಎನ್ಆರ್ 2020

2.

ದಿನಾಂಕ:01.10.2020ರ ಆದೇಶ/ ಮಾರ್ಗಸೂಚಿಗಳನ್ನು ಮತ್ತು ಕೋವಿಡ್-19 ನಿರ್ವಹಣೆಗಾಗಿ ಹೊರಡಿಸಿದ ರಾಷ್ಟ್ರೀಯ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಷರತ್ತಿಗೊಳಪಟ್ಟು ಇದೊಂದು ವಿಶೇಷ ಪ್ರಕರಣ ಎಂದು ಪರಿಗಣಿಸಿ ಸರ್ವ ಸದಸ್ಯರ ಸಭೆಯನ್ನು video conference / virtual meeting ಮೂಲಕ ನಡೆಸಲು 2020 ರ ಅವಧಿಗೆ ಮಾತ್ರ ಈ ಕೆಳಕಂಡ ನಿಬಂಧನೆಗೊಳಪಟ್ಟು ಅನುಮತಿ ನೀಡಿದೆ.

- ಸರ್ವ ಸದಸ್ಯರ ಸಭೆಯನ್ನು video conference / virtual meeting ಮೂಲಕ ನಡೆಸಬಹುದು.
- ಸರ್ವ ಸದಸ್ಯರ ಸಭೆ ನಡೆಯುವ ದಿನಾಂಕ ಮತ್ತು ವೇಳೆ ದಿನಪತ್ರಿಕೆಯಲ್ಲಿ ಪ್ರಕಟಿಸುವುದು.
- ಸಭೆಯ ನೋಟೀಸು ಹಾಗೂ ಇನ್ನಿತರೆ ದಾಖಲಾತಿಗಳನ್ನು ಸಂಘದ ವೆಬ್‌ಸೈಟ್ ಮೂಲಕ ಪ್ರಚುರಗೊಳಿಸುವುದು ಹಾಗೂ ಹಾಲಿ ಅನುಸರಿಸುತ್ತಿರುವ ಪದ್ಧತಿಯಂತೆ ನೋಟೀಸುಗಳನ್ನು ಅಂಚೆಯ ಮೂಲಕ ರವಾನಿಸಲು ಸಹ ಕ್ರಮವಿಡತಕ್ಕದ್ದು.
- ಇ-ಮೇಲ್ ಅಥವಾ ವೆಬ್‌ಸೈಟ್ ಹೊಂದಿಲ್ಲದವರು Remote e-voting system ಮೂಲಕ ಭಾಗವಹಿಸುವುದು.
- ಸದಸ್ಯರಿಗೆ ಡಿವಿಡೆಂಡ್‌ಗಳನ್ನು ಇಸಿಎಸ್ ಮೂಲಕ ಅವರುಗಳ ಖಾತೆಗೆ ಪಾವತಿಸಲು ಕ್ರಮವಿಡುವುದು.
- ಇಂಥಹ ಸಭೆಯ ನಡವಳಿಗಳನ್ನು ಅಧಿಕೃತವಾಗಿ ರೆಕಾರ್ಡ್ ಮಾಡಿ ದಾಖಲಿಸುವ ತಂತ್ರಜ್ಞಾನ ಅಳವಡಿಸಿಕೊಳ್ಳತಕ್ಕದ್ದು.
- ಸರ್ವ ಸದಸ್ಯರ ಸಭೆ ನಡೆಸುವ ಸ್ಥಳದಲ್ಲಿ ಕೋವಿಡ್-19ರ ನಿಯಮಾವಳಿಗಳಿಗೆ ಒಳಪಟ್ಟು ಎಂದಿನಂತೆ ಹಾಜರಾತಿಯನ್ನು ನಿರ್ವಹಿಸಿ ಸಹಕಾರ ಸಂಘಗಳ ಕಾಯ್ದೆ ಅನ್ವಯ ನಮೂದಿಸಿರುವ ಅಂಶಗಳನ್ನು ಕಾರ್ಯಸೂಚಿಯಲ್ಲಿ ಅಳವಡಿಸಿಕೊಂಡು ಹಾಲಿ ಪದ್ಧತಿಯಂತೆ ನಡವಳಿಗಳನ್ನು ನಡೆಸಲು ಕ್ರಮವಹಿಸತಕ್ಕದ್ದು.

ಸರ್ವ ಸದಸ್ಯರ ಸಭೆಯನ್ನು video conference / virtual meeting ಮೂಲಕ ನಡೆಸಲು ವ್ಯವಸ್ಥೆ ಇಲ್ಲದೇ ಇರುವಂತಹ ಸಹಕಾರ ಸಂಘಗಳು /ಸೌಹಾರ್ದ ಸಹಕಾರಿಗಳು ಸರ್ಕಾರದ ಆದೇಶ ಸಂಖ್ಯೆ:ಸಇ 43 ಸಿಎಲ್‌ಎಮ್ 2020 (ಇ) ದಿನಾಂಕ:24.06.2020 ಹಾಗೂ ಸರ್ಕಾರದ ಆದೇಶ ಸಂಖ್ಯೆ:ಸಇ 44 ಸಿಎಲ್‌ಎಮ್ 2020 (ಇ), ದಿನಾಂಕ:08.07.2020 ರನ್ವಯ ಕ್ರಮ ಕೈಗೊಳ್ಳಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ.ಎಂ.ಆಶಾ)**
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ,
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

<u>ಇವರಿಗೆ</u>

**ಸಂಕಲನಕಾರರು ಕರ್ನಾಟಕ ರಾಜ್ಯಪತ್ರ ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.**

**ಪ್ರತಿಗಳು: -**

1. ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ), (ಇ & ಆರ್‌ಎಸ್‌ಎ), (ಎ&ಇ) ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01
2. ಮಾನ್ಯ ಸಹಕಾರ ಸಚಿವರ, ಆಪ್ತ ಕಾರ್ಯದರ್ಶಿ ವಿಕಾಸ ಸೌಧ ಬೆಂಗಳೂರು.

3. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ ಬೆಂಗಳೂರು.
5. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು.
6. ಸಹಕಾರ ಸಂಘಗಳ ಜಂಟಿ ನಿಬಂಧಕರು/ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು ಬೆಂಗಳೂರು / ಮೈಸೂರು /ಕಲಬುರ್ಗಿ/ಬೆಳಗಾವಿ ಪ್ರಾಂತ .
7. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪನಿಬಂಧಕರುಗಳಿಗೆ (ಸಹಕಾರ ಸಂಘಗಳ ನಿಬಂಧಕರ ಮೂಲಕ)
8. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ., ಜೋಡಿ ರಸ್ತೆ, ಬೆಂಗಳೂರು-27.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ನಿರ್ಮಾಣ ಭವನ, ಡಾ||ರಾಜಕುಮಾರ್ ರಸ್ತೆ, 1ನೇ ಬ್ಲಾಕ್ ರಾಜಾಜಿನಗರ, ಬೆಂಗಳೂರು-10.
10. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಉಪನಿರ್ದೇಶಕರುಗಳಿಗೆ (ಲೆಕ್ಕಪರಿಶೋಧನಾ ನಿರ್ದೇಶಕರುಗಳ ಮೂಲಕ)
11. ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಹಕಾರ ಇಲಾಖೆ.
12. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿ.